#☆ Q. 73

158th Session-26

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ರಮೇಶ್ ಬಾಬು ಇವರು ನಿಯಮ-72ರಡಿ ಮಂಡಿಸಿರುವ ಸೂಚನೆಗೆ ಸರ್ಕಾರದ ಹೇಳಿಕೆ

**ಸೂಚನೆ:-**

ಬೆಂಗಳೂರು ದಕ್ಷಿಣ ತಾಲೂಕು ಉತ್ತರಹಳ್ಳಿ ಹೋಬಳಿ ಉತ್ತರಿ ಗ್ರಾಮದ ಸರ್ವೆ ನಂಬರ್ 111 ರಲ್ಲಿ ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಿಕೊಂಡು ಅನಧಿಕೃತವಾಗಿ ಕಟ್ಟಡಗಳ ನಿರ್ಮಿಸಿ ಎಸ್.ಆರ್. ನರಸಿಂಹಮೂರ್ತಿ ಎಂಬುವರು ಅನಧಿಕೃತವಾಗಿ ಮತ್ತು ಸುಳ್ಳು ದಾಖಲೆಯ ಮೂಲಕ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿದ್ದು, ಸದರಿ ಅಕ್ರಮ ಒತ್ತುವರಿಯನ್ನು ತೆರವುಗೊಳಿಸಿ ಸರ್ಕಾರಿ ಜಾಗವನ್ನು ಮರುವಶಕ್ಕೆ ಪಡೆಯಲು 16.09.2016 ರಲ್ಲಿ ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯ ಭೂ ದಾಖಲೆಗಳ ಜಂಟಿ ನಿರ್ದೇಶಕರು ಆದೇಶವನ್ನು ಮಾಡಿರುತ್ತಾರೆ. ಸದರಿ ಆದೇಶದ ಅನ್ವಯ ಕ್ರಮ ಕೈಗೊಳ್ಳಲು ಬೆಂಗಳೂರು ದಕ್ಷಿಣ ತಾಲ್ಲೂಕು ತಹಶೀಲ್ದಾರ್ ಅವರಿಗೆ ಪತ್ರ ಬರೆದಿರುತ್ತಾರೆ. ಆದರೆ ಕಂದಾಯ ಇಲಾಖೆಯು ಸದರಿ ಭೂಮಿಯನ್ನು ಇದುವರೆಗೆ ಮರುವಶಕ್ಕೆ ಪಡೆದಿರುವುದಿಲ್ಲ. ಆರೋಪಿತರು ಸದರಿ ಭೂಮಿಯಲ್ಲಿ ಮತ್ತೆ ಮತ್ತೆ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಭೂ ಒತ್ತುವರಿಯನ್ನು ಮಾಡುತ್ತಿದ್ದಾರೆ. ಬೇನಾಮಿ ಹೆಸರಿನಲ್ಲಿ ಅರ್ಜಿಗಳನ್ನು ಸಲ್ಲಿಸಿ, ಸತ್ತವರ ಹೆಸರಿನಲ್ಲಿ ಅರ್ಜಿಗಳನ್ನು ಸೃಷ್ಟಿ ಮಾಡಿ ಭೂಕಬಳಿಸುವುದನ್ನು ವೃತ್ತಿ ಮಾಡಿಕೊಂಡಿರುತ್ತಾರೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವು 22.03.2024ರಲ್ಲಿ ಇದೆ ಆರೋಪಿಯ ವಿರುದ್ಧ ಆದೇಶವನ್ನು ಹೊರಡಿಸಿ ಅಕ್ರಮ ಸ್ವಾಧೀನವನ್ನು ತೆರವುಗೊಳಿಸಿ ಅಕ್ರಮ ಕಟ್ಟಡಗಳನ್ನು ನೆಲಸಮಗೊಳಿಸಲು ಆದೇಶ ಮಾಡಿರುತ್ತಾರೆ. ಆದರೆ ಇಲ್ಲಿಯವರಿಗೆ ಸದರಿ ಭೂಮಿಯನ್ನು ಕಂದಾಯ ಇಲಾಖೆ ತನ್ನ ವಶಕ್ಕೆ ಪಡೆದಿರುವುದಿಲ್ಲ ಮತ್ತು ಅಕ್ರಮ ಕಟ್ಟಡವನ್ನು ತೆರವುಗೊಳಿಸಿರುವುದಿಲ್ಲ. ಸದರಿ ಭೂಮಿಯಲ್ಲಿ ಅಕ್ರಮ ಚಟುವಟಿಕೆಗಳು ಕಾನೂನು ಬಾಹಿರ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಿದ್ದು, ಇದನ್ನು ಕೂಡಲೇ ನಿಲ್ಲಿಸಿ ಸದರಿ ಭೂಮಿಯನ್ನು ಸರ್ಕಾರದ ವಶಕ್ಕೆ ಪಡೆಯಬೇಕಾಗಿರುತ್ತದೆ. ಬೇನಾಮಿ ಹೆಸರಿನಲ್ಲಿ ಟ್ರಸ್ಟ್ ಗಳನ್ನು ಸೃಷ್ಟಿ ಮಾಡಿ ಸದರಿ ಭೂಮಿಯಲ್ಲಿ ಕಾನೂನು ಬಾಹಿರವಾಗಿ ಚಟುವಟಿಕೆಗಳನ್ನು ಮಾಡಲಾಗುತ್ತಿದೆ. ಕಂದಾಯ ಇಲಾಖೆಯ ಅಧಿಕಾರಿಗಳನ್ನು ಬೆದರಿಸಿ ಪದೇಪದೇ ಸದರಿಭೂಮಿಯಲ್ಲಿ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. ಸರ್ಕಾರಿ ಭೂಮಿ ಮತ್ತು ಇತರೆ ಭೂಮಿಗಳ ಬೆಲೆಯೂ ಹೆಚ್ಚಾಗಿರುವುದರಿಂದ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿ ಸರ್ಕಾರಿ ಭೂಮಿಗಳಲ್ಲಿ ಅಕ್ರಮ ಚಟುವಟಿಕೆಗಳನ್ನು ನಡೆಸುತ್ತಿರುವುದನ್ನು ಸರ್ಕಾರ ನಿಯಂತ್ರಿಸಬೇಕಾಗಿದೆ. ಸದರಿ ಭೂಮಿಯನ್ನು ಸರ್ಕಾರ ವಶಪಡಿಸಿಕೊಳ್ಳಲು ಮತ್ತು ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಲು ಮಾನ್ಯ ಕಂದಾಯ ಸಚಿವರು ಕ್ರಮ ಕೈಗೊಳ್ಳಲು ಕೋರಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಹೇಳಿಕೆ:**

ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಉತ್ತರಿ ಗ್ರಾಮದ ಸ.ನಂ. 111 ರಲ್ಲಿ ಸರ್ಕಾರಿ ಜಮೀನಿಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣ ಸಂಖ್ಯೆ ಎಲ್.ಜಿ.ಸಿ(ಪಿ)ನಂ.1016/2018ರಲ್ಲಿ ಮಾನ್ಯ ನ್ಯಾಯಾಲಯವು ಸದರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸುವಂತೆ ದಿನಾಂಕ 22.03.2024 ರಂದು ಈ ಕೆಳಕಂಡಂತೆ ಆದೇಶಿಸಿರುತ್ತದೆ.

*"Acting under Section 255(2) of Cr.P.C., the accused is hereby convicted for the offence punishable under Section 4(3) of the Karnataka Land Grabbing Prohibition Act, 2011. Accused is hereby sentenced to undergo Simple Imprisonment for a period of Two years and accused is hereby sentenced to pay a fine of Rs.25,000/- for the offence punishable under Section 4(3) of the Karnataka Land Grabbing Prohibition Act, 2011. In default of payment of fine, accused shall undergo Simple Imprisonment for Three Months. Bail bond of accused and surety bond stand cancelled.*

***Issue direction to Tahsildar, Bengaluru South Taluk to take possession of the schedule property of the present case, more particularly Sy.No.111 of Uttari Village, Uttarahalli Hobli, Bengaluru South Taluk to an extent of 4 Acres 38 Guntas along with structures if any over the above said land, which is in unauthorized occupation of the accused of the present case within 45 days from the date of this order.***

***Issue further direction to Tahsildar, Bengaluru South Taluk to submit compliance report within one week from the date of the compliance of the court order. Supply free copy of this judgment to the accused forthwith."***

ಅದರಂತೆ ಉತ್ತರಿ ಗ್ರಾಮದ ಸ.ನಂ.111 ರಲ್ಲಿ 4-38 ಎ/ಗುಂ ಜಮೀನಿನ ಒತ್ತುವರಿ ಪ್ರದೇಶವನ್ನು ದಿನಾಂಕ 31.01.2026 ರಂದು ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಭೂಮಾಪಕರ ಸಮಕ್ಷಮ ಸರ್ಕಾರದ ವಶಕ್ಕೆ ಪಡೆಯಲಾಗಿದೆ ಹಾಗೂ ಸದರಿ ಪ್ರದೇಶದಲ್ಲಿ ನಾಮಫಲಕವನ್ನು ಅಳವಡಿಸಲಾಗಿರುತ್ತದೆ.

**ಸಂಖ್ಯೆ**: ಆರ್‌ಡಿ 102 ಎಲ್‌ಜಿಕ್ಯೂ 2026

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು